Online Newspaper Clipping Service

ಕನ್ನಡಪ್ರಭ

**Dtd- Monday, 15th, April- 2019**

**Page No.09**

# 3 ವರ್ಷ ಆಸ್ಪತ್ರೆ ನಿರ್ವಹಿಸಿದ್ರೆ ಮಾತ್ರ ವೈದ್ಯಕೀಯ ಕಾಲೇಜಿಗೆ ಮಾನ್ಯತೆ?

ನವದೆಹಲಿ: 2011ರಿಂದ 2018ರ ಅವಧಿಯಲ್ಲಿ ಅನುಮೋದನೆ ಪಡೆದುಕೊಂಡ 89 ಹೊಸ ವೈದ್ಯಕೀಯ ಕಾಲೇಜುಗಳ ಪೈಕಿ 39 ಕಾಲೇಜುಗಳಲ್ಲಿ ಆಸ್ಪತ್ರೆಗಳು ಕಾರ್ಯನಿರ್ವಹಿಸದೇ ಇರುವುದು ವೈದ್ಯಕೀಯ ಮಂಡಳಿಯ ತಪಾಸಣೆಯ ವೇಳೆ ಕಂಡು ಬಂದಿದೆ. ಈ ಹಿನ್ನೆಲೆಯಲ್ಲಿ ಕನಿಷ್ಠ 3 ವರ್ಷ ಕಾಲ ಆಸ್ಪತ್ರೆಗಳು ಕಾರ್ಯನಿರ್ವಹಿಸಿದ ವೈದ್ಯಕೀಯ ಕಾಲೇಜುಗಳಿಗೆ ಮಾತ್ರ ಭಾರತೀಯ ವೈದ್ಯಕೀಯ ಮಂಡಳಿಯ ಅನುಮತಿ ನೀಡುವ ಬಗ್ಗೆ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ ಚಿಂತನೆ ನಡೆಸಿದೆ. ವೈದ್ಯಕೀಯ ಮಂಡಳಿಯ (ಎಂಸಿಐ) ನಿಯಮದ ಪ್ರಕಾರ, 100 ಸೀಟುಗಳನ್ನು ಹೊಂದಿರುವ ವೈದ್ಯಕೀಯ ಕಾಲೇಜೊಂದು, 300 ಹಾಸಿಗೆಯ ಆಸ್ಪತ್ರೆಯೊಂದಿಗೆ ಕಾರ್ಯನಿರ್ವಹಿಸಬೇಕು. ಜೊತೆಗೆ ಎಂಸಿಐಗೆ ಅರ್ಜಿ ಸಲ್ಲಿಸುವ ವೇಳೆ ಆಸ್ಪತ್ರೆಯ ಶೇ.60ರಷ್ಟು ಹಾಸಿಗೆಗಳು ತುಂಬಿರಬೇಕು.